ಶಾರ್ಟ್ ಸರ್ಕ್ಯೂಟ್‌ನಿಂದ ದುರಂತ | ಆರ್.ಟಿ.ನಗರ ಠಾಣೆಯಲ್ಲಿ ಪ್ರಕರಣ | ಮಗು ಮಲಗಿಸಿ ಕೆಲಸಕ್ಕೆ ಹೋಗಿದ್ದ ತಾಯಿ

ಅಪಾರ್ಟ್‌ಮೆಂಟ್‌ನಲ್ಲಿ ಬೆಂಕಿ ಕರಕಲಾದ 4 ವರ್ಷದ ಮಗು

ಬೆಂಗಳೂರು: ಅಪಾರ್ಟ್‌ಮೆಂಟ್ ವೊಂದರ ಕೊಠಡಿಯಲ್ಲಿ ವಿದ್ಯುತ್ ಶಾರ್ಟ್ ಸರ್ಕ್ಯೂಟ್ ಪರಿಣಾಮ ಬೆಂಕಿ ಹೊತ್ತಿಕೊಂಡು 4 ವರ್ಷದ ಗಂಡುಮಗು ಸುಟ್ಟು ಕರಲಾಗಿರುವ ಹೃದಯವಿದ್ರಾವಕ ಘಟನೆ ಆರ್.ಟಿ. ನಗರದಲ್ಲಿ ನಡೆದಿದೆ.

ನೇಪಾಳದ ಮೂಲದ ಪೂರನ್ ಖಂಡಕ್ ಮತ್ತು ಲಕ್ಷ್ಮೀ ದಂಪತಿ ಪುತ್ರ ಅನೂಪ್ (4) ಮೃತ ಮಗು. ಸುಲ್ತಾನ್‌ಪಾಳ್ಯದ ರಿಯಾನ್‌ವುಡ್ ಅಪಾರ್ಟ್ ಮೆಂಟ್‌ನ 4ನೇ ಮಹಡಿಯ ಕೊಠಡಿಯಲ್ಲಿ ಭಾನುವಾರ ಸಂಜೆ ದುರಂತ ಸಂಭವಿಸಿದೆ.

ನೇಪಾಳ ಮೂಲದ ಪೂರನ್ ಖಂಡಕ್ ದಂಪತಿ ಕಳೆದ ಮೂರೂವರೆ ವರ್ಷಗಳಿಂದ ರಿಯಾನ್‌ವುಡ್ ಅಪಾರ್ಟ್‌ಮೆಂಟ್‌ನಲ್ಲಿ ಪೂರನ್ ಸೆಕ್ಯೂರಿಟಿ ಗಾರ್ಡ್ ಆಗಿದ್ದರೆ, ಪತ್ನಿ ಲಕ್ಷ್ಮೀ ಮನೆಗೆಲಸ ಮಾಡುತ್ತಿದ್ದರು. ಅಪಾರ್ಟ್‌ಮೆಂಟ್‌ನಲ್ಲಿ ನಾಲ್ಕನೇ ಮಹಡಿಯ ಮೇಲೆ ಶೀಟ್ ಹಾಕಿ ಒಂದು ಕೊಠಡಿ ನಿರ್ಮಿಸಿದ್ದು, ಅದನ್ನು ಪೂರನ್ ದಂಪತಿಗೆ ಉಳಿದುಕೊಳ್ಳಲು ನೀಡಲಾಗಿತ್ತು.

ಎಂದಿನಂತೆ ಭಾನುವಾರವೂ ಪೂರನ್ ಅಪಾರ್ಟ್‌ಮೆಂಟ್ ಎದುರು ಸೆಕ್ಯೂರಿಟಿ ಗಾರ್ಡ್ ಕೆಲಸ ಮಾಡುತ್ತಿದ್ದರು. ಪತ್ನಿ ಲಕ್ಷ್ಮೀ ಮಗುವನ್ನು ಆ ಕೊಠಡಿಯಲ್ಲಿ ಮಲಗಿಸಿ, ಬಾಗಿಲು ಹಾಕಿಕೊಂಡು ಮನೆಗೆಲಸಕ್ಕೆ ತೆರಳಿದ್ದರು. ಸಂಜೆ 5.30ರಲ್ಲಿ ಕೊಠಡಿಯಲ್ಲಿ ಹೊಗೆ ಕಾಣಿಸಿಕೊಂಡಿತು. ಈ ವೇಳೆ ಪೂರನ್ ಓಡಿಹೋಗಿ ನೋಡಿದಾಗ, ಕೊಠಡಿ ಒಳಗೆ ಬೆಂಕಿಹೊತ್ತಿರುವುದು ಕಂಡುಬಂದಿದೆ. ತಕ್ಷಣ ಬಾಗಿಲು ತೆರೆದು ನೋಡಿದಾಗ ಮಗು ಸುಟ್ಟು ಕರಕಲಾಗಿತ್ತು.

ಮಗುವನ್ನು ಕಳೆದುಕೊಂಡ ಪಾಲಕರ ಆಕ್ರಂದನ ಮುಗಿಲು ಮುಟ್ಟಿತ್ತು. ಶಾರ್ಟ್ ಸರ್ಕ್ಯೂಟ್‌ನಿಂದ ಕೊಠಡಿಯಲ್ಲಿರುವ ವಸ್ತುಗಳಿಗೆ ಬೆಂಕಿ ಹೊತ್ತಿಕೊಂಡಿರುವ ಸಾಧ್ಯತೆಯಿದೆ. ಈ ವೇಳೆ ನಿದ್ದೆ ಮಾಡುತ್ತಿದ್ದ ಮಗು ಮೃತಪಟ್ಟಿದೆ. ಈ ಸಂಬಂಧ ಆರ್.ಟಿ.ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದು ವರಿದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ನೀರಿನ ಟ್ಯಾಂಕರ್ ಡಿಕ್ಕಿಯಾಗಿ ದ್ವಿಚಕ್ರ ವಾಹನ ಸವಾರ ದುರ್ಮರಣ

ಬೆಂಗಳೂರು: ಮಾಗಡಿ ಮುಖ್ಯರಸ್ತೆಯಲ್ಲಿ ದ್ವಿಚಕ್ರ ವಾಹನಕ್ಕೆ ನೀರಿನ ಟ್ಯಾಂಕರ್ ಡಿಕ್ಕಿ ಹೊಡೆದ ಪರಿಣಾಮ ಒಬ್ಬ ಮೃತಪಟ್ಟು, ಮತ್ತೊಬ್ಬ ಗಾಯಗೊಂಡಿದ್ದಾರೆ. ಆಟೋ ಚಲಾಯಿಸುತ್ತಿದ್ದ ಅಂದ್ರಹಳ್ಳಿ ನಿವಾಸಿ ಆರ್. ಹರೀಶ್ (32) ಮೃತ. ಘಟನೆ ಸಂಬಂಧ ಹರೀಶ್ ಪತ್ನಿ ನವ್ಯಾ ನೀಡಿದ ದೂರಿನ ಮೇರೆಗೆ ನೀರಿನ ಟ್ಯಾಂಕರ್ ಚಾಲಕನ ವಿರುದ್ಧ ಪ್ರಕರಣ ದಾಖಲಿಸಿಕೊಳ್ಳಲಾಗಿದ್ದು, ಆರೋಪಿ ಚಾಲಕನಿಗಾಗಿ ಶೋಧ ನಡೆಯುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

» ಮಾಗಡಿ ಮುಖ್ಯರಸ್ತೆಯಲ್ಲಿ ಅವಘಡ

ಹರೀಶ್ ಹಿಂಬದಿ ಸವಾರನಾಗಿ ಭಾನುವಾರ ಮಧ್ಯರಾತ್ರಿ 2 ಗಂಟೆಗೆ ಸ್ನೇಹಿತ ಸುಚೀತ್ ಎಂಬುವರ ಜತೆ ಮಾಗಡಿ ಮುಖ್ಯ ರಸ್ತೆಯಿಂದ ಹೊಸಳ್ಳಿ ಕಡೆಗೆ ಹೋಗುತ್ತಿದ್ದರು. ಈ ವೇಳೆ ಎದುರಿನಿಂದ ವೇಗವಾಗಿ ಬರುತ್ತಿದ್ದ ನೀರಿನ ಟ್ಯಾಂಕರ್ ಬೈಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ಇಬ್ಬರು ಸವಾರರು ಕೆಳಗೆ ಬಿದ್ದರು. ವಾಹನದ ಮುಂಭಾಗದಲ್ಲಿ ಸಿಲುಕಿದ್ದ ಹರೀಶ್‌ನನ್ನು ಟ್ಯಾಂಕರ್ ಅಂದಾಜು 200 ಮೀಟರ್ ಎಳೆದೊಯ್ದ ಪರಿಣಾಮ ತೀವ್ರವಾಗಿ ಗಾಯಗೊಂಡಿದ್ದ ಅವರನ್ನು ಸ್ಥಳೀಯರು ಸಮೀಪದ ಆಸ್ಪತ್ರೆಗೆ ದಾಖಲಿಸಿದರು. ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ವಿಕ್ಟೋರಿಯಾಗೆ ದಾಖಲಿಸಿದರೂ ಹರೀಶ್ ಬದುಕುಳಿಯಲಿಲ್ಲ. ಸುಚೀತ್‌ಗೆ ಚಿಕಿತ್ಸೆ ಮುಂದುವರಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಕೃತ್ಯ ಎಸಗಿದ ನೀರಿನ ಟ್ಯಾಂಕರ್ ಚಾಲಕ ವಾಹನ ಬಿಟ್ಟು ಪರಾರಿಯಾಗಿದ್ದಾನೆ. ಮಾಲೀಕರನ್ನು ಸಂಪರ್ಕಿಸಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಕಾಮಾಕ್ಷಿಪಾಳ್ಯ ಸಂಚಾರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಒಂಟಿ ಸಲಗ ದಾಳಿಗೆ ಬಲಿ

ಗೋಣಿಕೊಪ್ಪ: ಪೊನ್ನಂಪೇಟೆ ತಾಲೂಕಿನ ಬೀರುಗ ಗ್ರಾಮದ ಬಾಮುಂಡಿ ಮುತ್ತಪ್ಪ ಕೊಲ್ಲಿ ರಸ್ತೆಯಲ್ಲಿ ಸೋಮವಾರ ಬೆಳ್ಳಂಬೆಳಗ್ಗೆ ಕಾಡಾನೆ ದಾಳಿಗೆ ವೃದ್ಧರೊಬ್ಬರು ಬಲಿಯಾಗಿದ್ದಾರೆ. ಗ್ರಾಮದ ಅಯ್ಯಮಾಡ ಮಾದಯ್ಯ (ಬೊಗ್ಗ-63) ಮೃತರು. ಮಾದಯ್ಯ ಬೆಳಗ್ಗೆ ತಮ್ಮ ತೋಟಕ್ಕೆ ತೆರಳುತ್ತಿದ್ದ ವೇಳೆ ಒಂಟಿ ಸಲಗ ದಾಳಿ ಮಾಡಿ ತೀವ್ರ ಗಾಯಗೊಳಿಸಿತು. ಇವರ ಚೀರಾಟ ಕೇಳಿದ ಅಕ್ಕಪಕ್ಕದ ತೋಟಗಳಿಲ್ಲದ್ದ ಜನರು ಬಂದು ನೋಡುವಷ್ಟರಲ್ಲಿ ಮಾದಯ್ಯ ಮೃತಪಟ್ಟಿದ್ದರು. ಮೃತರ ಕುಟುಂಬಕ್ಕೆ 15 ಲಕ್ಷ ರೂ. ಪರಿಹಾರ ಚೆಕ್ ಅನ್ನು ಡಿಎಫ್‌ಒ ಭಾಸ್ಕರ್ ನೀಡಿದರು. ಬೀರುಗ ಹಾಗೂ ಕುರ್ಚಿ ಭಾಗದಲ್ಲಿ 40ಕ್ಕೂ ಹೆಚ್ಚು ಕಾಡಾನೆಗಳು ವಿವಿಧ ತೋಟಗಳಲ್ಲಿ ಬೀಡು ಬಿಟ್ಟಿದ್ದು, ರೈತರು ಕಾಫಿ, ಬೆಳೆಗಾರರು, ಕಾರ್ಮಿಕರು ಇಲ್ಲಿ ಬದುಕುವುದೇ ಕಷ್ಟವಾಗಿದೆ. ವನ್ಯಪ್ರಾಣಿಗಳ ಉಪಟಳದಿಂದ ಈ ಭಾಗದ ಜನರು ಸಂಕಷ್ಟಕ್ಕೀಡಾಗಿದ್ದಾರೆ ಎಂದು ರೈತ ಸಂಘದ ಮುಖಂಡರು ಕಿಡಿಕಾರಿದರು.

ಸುದ್ದಿ ಕಾರ್ನರ್

ಅಂಬಾರಿಯಲ್ಲಿ ಸಾಗಿದ ಶ್ರೀ ಅಣ್ಣಮ್ಮ ದೇವಿ



ವಿಜಯವಾಣಿ ಚಿತ್ರ

ಬೆಂಗಳೂರು: ಶ್ರೀ ಅಣ್ಣಮ್ಮದೇವಿಯ 85ನೇ ಜಾತ್ರಾ ಮಹೋತ್ಸವ ಪ್ರಯುಕ್ತ ನಗರದ ಕಬ್ಬನ್‌ಪೇಟೆ ಮುಖ್ಯರಸ್ತೆಯಲ್ಲಿನ ಶ್ರೀ ಅಣ್ಣಮ್ಮದೇವಿ ಸೇವಾ ಸಮಿತಿಯಿಂದ ಸೋಮವಾರ ಆನೆ ಮೇಲೆ ಅಣ್ಣಮ್ಮದೇವಿ ಅಂಬಾರಿ ಉತ್ಸವ ವಿಜೃಂಭಣೆಯಿಂದ ನೆರವೇರಿತು. ವಾರ್ಷಿಕೋತ್ಸವ ಹಿನ್ನೆಲೆ ಎಂಟು ದಿನಗಳಿಂದ ದೇವಾಲಯದಲ್ಲಿ ವಿವಿಧ ಧಾರ್ಮಿಕ ವಿಧಿ ವಿಧಾನ, ಪೂಜಾ ಕೈಂಕರ್ಯಗಳು ಜರುಗಿದವು. ಕೊನೆಯ ದಿನವಾದ ಸೋಮವಾರ ಹೂವಿನ ಅಂಬಾರಿಯಲ್ಲಿ ದೇವಿಯ ಉತ್ಸವ ಮೂರ್ತಿಯನ್ನು ಕೂರಿಸಿ, ರೇಷ್ಮೆ ವಸ್ತ್ರ, ಹೂವುಗಳಿಂದ ಅಲಂಕರಿಸಿ, ಸಹಸ್ರಾರು ಭಕ್ತರ ಸಮ್ಮುಖದಲ್ಲಿ ಮೆರವಣಿಗೆ ನಡೆಸಲಾಯಿತು ಎಂದು ಸೇವಾ ಸಮಿತಿ ಅಧ್ಯಕ್ಷ ಎಂ. ವೆಂಕಟೇಶ್, ಕಾರ್ಯದರ್ಶಿ ಎಂ. ಕುಪ್ಪುಸ್ವಾಮಿ ತಿಳಿಸಿದ್ದಾರೆ.

» ಅದ್ದೂರಿಯಾಗಿ 85ನೇ ವರ್ಷಾಚರಣೆ

ಕಬ್ಬಿನ ಗದ್ದೆಯಲ್ಲೇ 2 ದಿನ ಕಳೆದ ಬಾಲಕ

ಚಾಮರಾಜನಗರ: ತಾಲೂಕಿನ ಗ್ರಾಮವೊಂದರಲ್ಲಿ ಅಪ್ಪ-ಅಮ್ಮ ಬೈಯ್ಯುತ್ತಾರೆ ಎಂದು ಹೆದರಿ ಎರಡು ದಿನಗಳ ಹಿಂದೆ ಮನೆಯಿಂದ ಕಾಣೆಯಾಗಿದ್ದ 8 ವರ್ಷದ ಬಾಲಕ ಸೋಮವಾರ ಅದೇ ಊರಿನ ಕಬ್ಬಿನ ಗದ್ದೆಯಲ್ಲಿ ಪತ್ತೆಯಾಗಿದ್ದಾನೆ.ಮನೆಯಲ್ಲಿದ್ದ ನೂರು ರೂ. ಖರ್ಚು ಮಾಡಿಕೊಂಡಿದ್ದ ಬಾಲಕ ಕಾಣೆಯಾಗಿದ್ದ. ಪೊಲೀಸ್ ಠಾಣೆಗೆ ದೂರು ನೀಡುವ ಮೊದಲು ಎಲ್ಲೆಡೆ ಹುಡುಕುವ ಪ್ರಯತ್ನ ನಡೆದಿದೆ. ಈ ಹಿನ್ನೆಲೆ ಬಾಲಕನ ಭಾವಚಿತ್ರವನ್ನು ಜಾಲತಾಣಗಳಲ್ಲಿ ಹಂಚಿಕೊಂಡು ಪತ್ತೆಗೆ ಮನವಿ ಮಾಡಲಾಗಿತ್ತು. ಸೋಮವಾರ ಬೆಳಗ್ಗೆ ಗ್ರಾಮಸ್ಥರೊಬ್ಬರು ತಮ್ಮ ಕಬ್ಬಿನ ಗದ್ದೆಗೆ ಹೋದಾಗ ಗದ್ದೆಯಲ್ಲಿ ಬಾಲಕ ಸಿಕ್ಕಿದ್ದಾನೆ. ವಿಚಾರಿಸಿದಾಗ ಎರಡು ದಿನಗಳಿಂದ ಗದ್ದೆಯಲ್ಲೇ ಇದ್ದು, ರಾತ್ರಿಯೆಲ್ಲ ಅಲ್ಲೇ ಮಲಗಿದ್ದಾಗಿ ತಿಳಿಸಿದ್ದಾನೆ. ಬಾಲಕನನ್ನು ತಂದೆ-ತಾಯಿಗೆ ಒಪ್ಪಿಸಲಾಗಿದೆ.

» 100 ರೂ. ಖರ್ಚು ಮಾಡಿಕೊಂಡಿದ್ದಕ್ಕೆ ಹೆದರಿ ಕಾಣೆಯಾಗಿದ್ದ

ಪಾಡ್ದನ ಕಲಾವಿದೆ ಗಿಡಿಗೆರೆ ರಾಮಕ್ಕ ನಿಧನ

ಕಟೀಲು (ದ.ಕ.): ಪಾಡ್ದನ ಕಲೆಯ ಹಿರಿಯ ಕಲಾವಿದೆ, ರಾಜ್ಯಪ್ರಶಸ್ತಿ ಪುರಸ್ಕೃತ ಗಿಡಿಗೆರೆ ರಾಮಕ್ಕ ಮೊಗೇರ (102) ಸೋಮವಾರ ಕಟೀಲು ಗಿಡಿಗೆರೆಯ ಮನೆಯಲ್ಲಿ ನಿಧನರಾದರು. ಅವರಿಗೆ ಪುತ್ರಿ ಹಾಗೂ ಆರು ಪುತ್ರರಿದ್ದಾರೆ. ಅಕ್ಷರಾಭ್ಯಾಸದ ಹೊರತಾಗಿಯೂ ಓ ಬೆಲೆ, ನಲ್ಲೂರಿ ಮಾಮ, ಮಂಜೊಟ್ಟಿ ಗೋಣ, ಗೋವಿಂದ ಬದನೆ, ಕನಡ, ಮಾಲಂಡ್ ಮರ, ಕುಮಾರ, ಸಿರಿ, ಬಂಟರು, ಅಬ್ಬಗ-ದಾರಗೆ ಸೇರಿ ಹಲವಾರು ಪಾಡ್ದನ ಅವರಿಗೆ ಕಂಠಪಾಠವಾಗಿದ್ದವು. ವೀರರಾಣಿ ಅಬ್ಬಕ್ಕ ಪ್ರಶಸ್ತಿ, ರಾಜ್ಯೋತ್ಸವ ಪ್ರಶಸ್ತಿ ಸೇರಿ ನೂರಾರು ಸನ್ಮಾನಗಳು ರಾಮಕ್ಕಗೆ ಸಂದಿವೆ.

ಜಲಮಂಡಲಿ ನಿರ್ಲಕ್ಷ್ಯಕ್ಕೆ ಯುವಕ ಬಲಿ?

ಕೊಮ್ಮಘಟ್ಟ ವೃತ್ತದಲ್ಲಿ ತೋಡಿದ್ದ ಗುಂಡಿಗೆ ಬಿದ್ದ ಬೈಕ್ | ಇಬ್ಬರು ಪ್ರಾಣಾಪಾಯದಿಂದ ಪಾರು

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಕೆಂಗೇರಿ ಬಳಿಯ ಕೊಮ್ಮಘಟ್ಟ ಸರ್ಕಲ್‌ನಲ್ಲಿ ಜಲ ಮಂಡಳಿ ತೋಡಿದ್ದ ಗುಂಡಿಗೆ ದ್ವಿಚಕ್ರ ವಾಹನ ಸಹಿತ ಬಿದ್ದ ಮೂವರ ಪೈಕಿ ಒಬ್ಬ ಸವಾರ ಮೃತಪಟ್ಟು, ಇಬ್ಬರು ಗಾಯಗೊಂಡಿದ್ದಾರೆ.

ಜೆ.ಜೆ. ನಗರದ ಸದ್ದಾಂ ಹುಸೇನ್ (20) ಮೃತರು. ಉಮ್ರಾನ್ ಪಾಷಾ ಮತ್ತು ಮುಬಾರಕ್ ಪಾಷಾ ಗಾಯಗೊಂಡು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಮೂವರು ಸ್ನೇಹಿತರಾಗಿದ್ದು ಜೆ.ಜೆ. ನಗರ ನಿವಾಸಿಗಳಾಗಿದ್ದಾರೆ.

ಸದ್ದಾಂ ಹುಸೇನ್

ಜೆ. ನಗರದವರಾದ ಮೂವರು ಕೊಮ್ಮಘಟ್ಟದಲ್ಲಿ ಗುಜರಿ ವಸ್ತುಗಳ ವ್ಯಾಪಾರ ಮಾಡುತ್ತಾರೆ. ಭಾನುವಾರ ರಾತ್ರಿ 8.30ಕ್ಕೆ ವ್ಯಾಪಾರ ಮುಗಿಸಿಕೊಂಡು ಮೂವರು ಯುವಕರು ಒಂದೇ ದ್ವಿಚಕ್ರ ವಾಹನದಲ್ಲಿ ಮನೆ ಕಡೆಗೆ ಹೊರಟಿದ್ದರು. ಕೊಮ್ಮಘಟ್ಟ ಸರ್ಕಲ್ ಬಳಿ ಬರುವಾಗ ಬ್ಯಾರಿಕೇಡ್ ನಡುವಿನ ಸಣ್ಣ ಜಾಗದಲ್ಲಿ ವೇಗವಾಗಿ ದ್ವಿಚಕ್ರ ವಾಹನ ಚಲಾಯಿಸಿದ ಪರಿಣಾಮ ನಿಯಂತ್ರಣ ತಪ್ಪಿ ದ್ವಿಚಕ್ರ ವಾಹನ ಸಹಿತ ಮೂವರು ಅಂದಾಜು 10 ಅಡಿ ಇರುವ ಗುಂಡಿಗೆ ಬಿದ್ದರು. ಈ ವೇಳೆ ದ್ವಿಚಕ್ರ ವಾಹನ ಚಲಾಯಿಸುತ್ತಿದ್ದ ಸವಾರ ಸದ್ದಾಂ ಹುಸೇನ್ ಗಂಭೀರವಾಗಿ ಗಾಯಗೊಂಡು ಸ್ಥಳದಲ್ಲೇ ಮೃತಪಟ್ಟಿದ್ದಾನೆ. ಉಳಿದಿಬ್ಬರು ಹಿಂಬದಿ ಸವಾರರು ಗಾಯಗೊಂಡು ಗುಂಡಿಯಲ್ಲಿ ಒದ್ದಾಡುತ್ತಿದ್ದರು. ಆಗ ನೆರವಿಗೆ ಧಾವಿಸಿದ ಸ್ಥಳೀಯರು ಗಾಯಾಳುಗಳನ್ನು ಗುಂಡಿಯಿಂದ ಮೇಲಕ್ಕೆ ಎತ್ತಿ ಸಮೀಪದ ಆಸ್ಪತ್ರೆಗೆ ಕರೆದೊಯ್ದಿದ್ದಾರೆ.

ವಿಷಯ ತಿಳಿದು ಸ್ಥಳಕ್ಕೆ ದೌಡಾಯಿಸಿದ ಕೆಂಗೇರಿ ಸಂಚಾರ ಠಾಣೆ ಪೊಲೀಸರು, ಪರಿಶೀಲನೆ ನಡೆಸಿ ಮೃತದೇಹವನ್ನು ಆಸ್ಪತ್ರೆಗೆ ಸಾಗಿಸಿದ್ದಾರೆ. ಬಳಿಕ ಆ ಗುಂಡಿ ಸುತ್ತ ಹೆಚ್ಚುವರಿ ಬ್ಯಾರಿಕೇಡ್ ಅಳವಡಿಸಿ, ಯಾರೋ ಆ ಕಡೆ ಓಡಾಡದಂತೆ ರಸ್ತೆ ಬಂದ್ ಮಾಡಿದ್ದರು. ಈ ಸಂಬಂಧ ಕೆಂಗೇರಿ ಸಂಚಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರಿದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಜಲಮಂಡಲಿ ಮುಂಜಾಗ್ರತ ಕ್ರಮ ವಹಿಸಿಲ್ಲ: ಪೈಪ್‌ಲೈನ್ ಕಾಮಗಾರಿ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ಜಲಮಂಡಲಿ ಯಾವುದೇ ಬ್ಯಾರಿಕೇಡ್ ಅಥವಾ ಸೂಚನಾ ಫಲಕ ಅಳವಡಿಸದಿರುವುದು ದುರಂತಕ್ಕೆ ಕಾರಣ ಎಂದು ಸ್ಥಳಿಯರು ಆರೋಪಿಸಿದ್ದಾರೆ. ಸ್ಥಳಕ್ಕೆ ಪಶ್ಚಿಮ ವಿಭಾಗದ ಡಿಸಿಪಿ ಅನಿತಾ ಬಿ.ಹದ್ದಣ್ಣನವರ್ ಭೇಟಿ ನೀಡಿ ಪರಿಶೀಲಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

ಅಂತಿಮ ವರದಿಯಲ್ಲಿ ಲೋಪ ಕಂಡುಬಂದಲ್ಲಿ ಕಠಿಣ ಕ್ರಮ

ಕೊಮ್ಮಘಟ್ಟ ಸರ್ಕಲ್ ಬಳಿ ವಾಲ್ ಚೇಂಬರ್ ಅಳವಡಿಸಲು ತೋಡಿದ್ದ ಗುಂಡಿಯಲ್ಲಿ ಆಕಸ್ಮಿಕವಾಗಿ ಬಿದ್ದು ಓರ್ವ ಯುವಕ ಸಾವನ್ನಪ್ಪಿ, ಇಬ್ಬರು ಯುವಕರು ಗಾಯಗೊಂಡಿರುವುದಕ್ಕೆ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವಿಷಾದ ವ್ಯಕ್ತಪಡಿಸುತ್ತದೆ. ಘಟನೆಯ ಬಗ್ಗೆ ಮಾಹಿತಿ ಸಿಕ್ಕ ತಕ್ಷಣ ಮಂಡಳಿ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ವರದಿ ಸಲ್ಲಿಸಿದ್ದು, ಪ್ರಾಥಮಿಕ ಹಂತದ ವರದಿಯಲ್ಲಿ ಯಾವುದೇ ಲೋಪ ಕಂಡುಬಂದಿಲ್ಲ ಎಂದು ಜಲಮಂಡಳಿ ಅಧ್ಯಕ್ಷ ಡಾ.ವಿ.ರಾಮ್ ಪ್ರಸಾತ್ ಮನೋಹರ್ ತಿಳಿಸಿದ್ದಾರೆ. ಕಾಮಗಾರಿ ನಡೆಸುವ ಸಂದರ್ಭದಲ್ಲಿ ಅಳವಡಿಸಿಕೊಳ್ಳಬಹುದಾದ ಎಲ್ಲ ಮುಂಜಾಗ್ರತಾ ಕ್ರಮಗಳನ್ನು ಅಳವಡಿಸಿಕೊಳ್ಳಲಾಗಿತ್ತು. ಈ ಬಗ್ಗೆ ಈಗಾಗಲೆ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಕೆಯಾಗಿದ್ದು, ಪೊಲೀಸರು ತನಿಖೆ ಕೈಗೊಂಡಿದ್ದಾರೆ. ಅಂತಿಮ ವರದಿಯಲ್ಲಿ ಲೋಪದೋಷ ಕಂಡಬಂದಲ್ಲಿ ಸಂಬಂಧಪಟ್ಟವರ ಮೇಲೆ ಕಠಿಣ ಕ್ರಮ ಕೈಗೊಳ್ಳಲು ಜಲಮಂಡಳಿ ಸಿದ್ಧವಿದೆ ಎಂದು ಸ್ಪಷ್ಟಪಡಿಸಿದರು. ಜಲಮಂಡಳಿ ವತಿಯಿಂದ ಕೈಗೊಳ್ಳಲಾಗುತ್ತಿರುವ ಕಾಮಗಾರಿಯ ಪ್ರದೇಶದಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಹೆಚ್ಚಿನ ನಿಗಾ ವಹಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಲಮಂಡಳಿ ವಿರುದ್ಧ ದೂರು

ಘಟನೆಗೆ ಕಾರಣರಾದ ಬೆಂಗಳೂರು ಜಲಮಂಡಳಿ ಅಧಿಕಾರಿಗಳು ಮತ್ತು ಕಂಟ್ರಾಕ್ಟರ್ ವಿರುದ್ಧ ಕ್ರಮ ಜರುಗಿಸಬೇಕೆಂದು ಮೃತನ ಪಾಲಕರು ಠಾಣೆಗೆ ದೂರು ನೀಡಿದ್ದು, ದೂರಿನ ಹಿನ್ನೆಲೆಯಲ್ಲಿ ಪ್ರಕರಣ ದಾಖಲಿಸಿಕೊಳ್ಳಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

₹867 ಸೂಟ್‌ಗೆ ₹1.49 ಲಕ್ಷ ಕಳೆದುಕೊಂಡ ಶಿಕ್ಷಕಿ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಆನ್‌ಲೈನ್ ಶಾಪಿಂಗ್‌ನಲ್ಲಿ 867 ರೂ. ಬೆಲೆಯ ಸೂಟ್ ಖರೀದಿಸಿದ ಶಿಕ್ಷಕಿ, ಕಳಪೆ ಎಂದು ವಾಪಸ್ ನೀಡಲು ಗೂಗಲ್‌ನಲ್ಲಿ ಸಿಕ್ಕ ಹೆಲ್ಪ್‌ಲೈನ್‌ಗೆ ಕರೆ ಮಾಡಿ 1.49 ಲಕ್ಷ ರೂ. ಕಳೆದುಕೊಂಡಿದ್ದಾರೆ. ಹೆಬ್ಬಾಳದ ಕೇಂದ್ರೀಯ ವಿದ್ಯಾಲಯದ ಶಿಕ್ಷಕಿ ವಂಚನೆಗೆ ಒಳಗಾದವರು. ಇವರು ಕೊಟ್ಟ ದೂರಿನ ಮೇರೆಗೆ ಸದಾಶಿವನಗರ ಪೊಲೀಸರು ಪ್ರಕರಣ ದಾಖಲು ಮಾಡಿಕೊಂಡು ತನಿಖೆ ಕೈಗೊಂಡಿದ್ದಾರೆ.

» ಗೂಗಲ್‌ನಲ್ಲಿ ಹೆಲ್ಪ್‌ಲೈನ್ ಸರ್ಚ್ ಮಾಡಿ ಕರೆ

» ಆ್ಯಪ್ ಲಿಂಕ್ ಕಳುಹಿಸಿ ಎಂಪಿನ್ ನಂಬರ್ ಪಡೆದು ವಂಚನೆ

ಮಾರ್ಚ್ 28ರಂದು ಆನ್‌ಲೈನ್ ಶಾಪಿಂಗ್‌ನಲ್ಲಿ 867 ರೂ. ಬೆಲೆಯ ಸೂಟ್ ಬುಕ್ ಮಾಡಿ ಡೆಬಿಟ್ ಕಾರ್ಡ್‌ನಲ್ಲಿ ಹಣ ಪಾವತಿ ಮಾಡಿದ್ದು, ಏ.5ಕ್ಕೆ ಸೂಟ್ ಕೈಸೇರಿತ್ತು. ಆದರೆ, ಸೂಟ್ ಗುಣಮಟ್ಟ ನಿರೀಕ್ಷೆಯಂತೆ ಇರಲಿಲ್ಲ ಎಂಬ ಕಾರಣಕ್ಕೆ ಹಿಂತಿರುಗಿಸಲು ಸಂಬಂಧಪಟ್ಟ ಕಂಪನಿಗೆ ಇಮೇಲ್‌ನಲ್ಲಿ ದೂರು ಸಲ್ಲಿಸಿದ್ದರು. ಅದೇ ರೀತಿಯಾಗಿ ಗೂಗಲ್‌ನಲ್ಲಿ ಸಿಕ್ಕ ಕಸ್ಟಮರ್ ಕೇರ್ ನಂಬರ್‌ಗೆ ಕರೆ ಮಾಡಿದಾಗ ಕರೆ ಸ್ವೀಕೃತವಾಗಿಲ್ಲ.

ಸ್ವಲ್ಪ ಹೊತ್ತಿನ ಬಳಿಕ ಅದೇ ನಂಬರ್‌ನಿಂದ ಕರೆ ಮಾಡಿದ ಅಪರಿಚಿತ ವ್ಯಕ್ತಿ, ಹಣ ರೀಫಂಡ್ ಮಾಡುವುದಾಗಿ ನಂಬಿಸಿ, ಎಪಿಕೆ ಆ್ಯಪ್ ಡೌನ್‌ಲೋಡ್ ಮಾಡಿಕೊಳ್ಳುವಂತೆ ಸಲಹೆ ನೀಡಿದ್ದ. ಅದರಂತೆ ಶಿಕ್ಷಕಿ, ಮೊಬೈಲ್‌ನಲ್ಲ